**ಅಸಲು ದಾವ ಸಂಖ್ಯೆ: 292/2022**
**ಪಿ.ಡಬ್ಲೂ -1**

ದಿಃ 12-11-2024 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.
**ಮುಂದುವರೆದ ಪಾಟೀ ಸವಾಲು ಪ್ರತಿವಾದಿ ಪರ ವಕೀಲರಾದ ಶ್ರೀ ಎಸ್ ವಿ ಜಿ ರವರಿಂದಃ-**

1. ನಾನು ಈಗ ಮನೆ ನಂಬರ 393, ಹಂಗರಗಾ, ಬೆಳಗಾವಿಯಲ್ಲಿ ವಾಸವಿರುತ್ತೇನೆ. ಸದರಿ ಮನೆ ಹಂಗರಗಾ ಊರಿನ ಮುಖ್ಯ ರಸ್ತೆಯಲ್ಲಿ ಇರುತ್ತದೆ. ಸದರಿ ಮನೆಯನ್ನು ನಾನು 2004-05 ನೇ ಇಸವಿಯಲ್ಲಿ ಕಟ್ಟಿರುತ್ತೇನೆ. ಸದರಿ ಮನೆ ಕಟ್ಟುವಾಗ ನನ್ನ ಸಹೋದರ ಮಹಾದೇವ ಎಂದರೆ ಪ್ರತಿವಾದಿಯು ನನಗೆ ಸ್ವಲ್ಪ ಹಣವನ್ನು ಕೊಟ್ಟಿದ್ದರು ಎಂದರೆ ಸರಿಯಲ್ಲ. ಸದರಿ ಮನೆಯನ್ನು ನಾನು ಬೇರೆಯಾದ ನಂತರ ಕಟ್ಟಿರುತ್ತೇನೆ ಎಂದರೆ ಸರಿ. ಸದರಿ ಮನೆಯನ್ನು ಆಸ್ತಿಗಳಲ್ಲಿ ವಿಭಾಗವಾದ ನಂತರ ಕಟ್ಟಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿ ಮುಂದುವರೆದು ಆಸ್ತಿಗಳಲ್ಲಿ ಯಾವುದೇ ವಿಭಾಗ ಆಗಿರುವುದಿಲ್ಲ ಎಂದು ನುಡಿಯುತ್ತಾರೆ. ಮನೆ ನಂಬರ 393 ರ ಮನೆಯು ಈ ದಾವೆಯಲ್ಲಿ ದಾವಾ ಸ್ವತ್ತು ಆಗಿರುವುದಿಲ್ಲ ಎಂದರೆ ಸರಿ. ಸದರಿ ಆಸ್ತಿಯನ್ನು ದಾವಾ ಆಸ್ತಿಯಲ್ಲಿ ಸೇರಿಸಲು ತೊಂದರೆ ಇರಲಿಲ್ಲ ಎಂದರೆ ಸರಿ.

2. ಪ್ರತಿವಾದಿಗೆ ತೊಂದರೆ ಕೊಡುವ ಉದ್ದೇಶದಿಂದ ನಾನು ಈ ಸುಳ್ಳು ದಾವೆಯನ್ನು ಹೂಡಿರುತ್ತೇನೆ ಎಂದರೆ ಸರಿಯಲ್ಲ. ಈ ದಾವೆಯಲ್ಲಿ ನನ್ನ ಸಹೋದರಿಯರನ್ನು ನಾನು ಪಕ್ಷಗಾರರನ್ನಾಗಿ ಮಾಡಿರುವುದಿಲ್ಲ ಎಂದರೆ ಸರಿ. ಈ ದಾವೆಯಲ್ಲಿ ನಾನು ಎಲ್ಲಾ ಆಸ್ತಿಗಳನ್ನು ಸೇರಿಸಿರುವುದಿಲ್ಲ ಎಂದರೆ ಸರಿ. ದಾವಾ ಸ್ವತ್ತಿನ ಮೇಲೆ ನನಗೆ ಯಾವುದೇ ಹಕ್ಕು ಇರುವುದಿಲ್ಲ ಎಂದರೆ ಸರಿಯಲ್ಲ.

ಮರುವಿಚಾರಣೆ ಇರುವುದಿಲ್ಲ.

(ಸಾಕ್ಷಿಯ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ ಸರಿಯಿದೆ.

Sd/-

ಪ್ರಧಾನ ಸಿವಿಲ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಧೀಶರು,

ಬೆಳಗಾವಿ.